## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: ಸಫಾಯಿ ಕರ್ಮಚಾರಿಗಳಿಗೆ/ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳು ಹಾಗೂ ಮೃತಪಟ್ಟ ಮಾನ್ಯುಯಲ್ ಸ್ಕ್ಯಾವೆಂಜರ್‌ಗಳ ಮಕ್ಕಳಿಗೆ ರಾಜ್ಯ ವ್ಯಾಪ್ತಿ ಏಕ ಕಾಲದಲ್ಲಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಆಯೋಜಿಸುವ ಬಗ್ಗೆ.

**ಓದಲಾಗಿದೆ**:
1. ಸರ್ಕಾರದ ಆದೇಶ ಸಂಖ್ಯೆ: ನಅಇ 124 ಟಿಎಂಎಸ್ 2012, ದಿನಾಂಕ:18.05.2015
2. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಇವರ ಏಕ ಕಡತ ಸಂಖ್ಯೆ: KSCSK/ADMN/OTH/8/2023, E-1117452.

*****

**ಪ್ರಸ್ತಾವನೆ:-**

ಮೇಲೆ ಕ್ರಮಾಂಕ (1) ರಲ್ಲಿ ಓದಲಾದ ನಗರಾಭಿವೃದ್ಧಿ ಇಲಾಖೆಯ ಆದೇಶ ದಿನಾಂಕ: 18.05.2015ರಲ್ಲಿ ಪೌರಕಾರ್ಮಿಕರ ಕುಟುಂಬದ ಕಲ್ಯಾಣಕ್ಕಾಗಿ ವಿದ್ಯಾಭ್ಯಾಸ, ವಸತಿ ಮತ್ತು ಅವರ ಉದ್ಯೋಗಾರ್ಹತೆಗಳಿಗಾಗಿ ಶೇ.24.10 ಎಸ್.ಸಿ.ಪಿ/ಟಿ.ಎಸ್.ಪಿ ಅನುದಾನ ನಿಗದಿಪಡಿಸಿ, ಅದರಲ್ಲಿ ಶೇ.20 ರಷ್ಟನ್ನು ಮೀಸಲಿಟ್ಟು ಈ ಅನುದಾನವನ್ನು ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳ ಎಸ್.ಸಿ.ಪಿ/ಟಿ.ಎಸ್.ಪಿ ಅನುದಾನದಡಿ ಭರಿಸಲು ಅವಕಾಶ ಕಲ್ಪಿಸಲಾಗಿದೆ.

ಮೇಲೆ ಕ್ರಮಾಂಕ (2) ರಲ್ಲಿ ಓದಲಾದ ಏಕ ಕಡತದಲ್ಲಿ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಇವರು ಸಫಾಯಿ ಕರ್ಮಚಾರಿಗಳ ಮತ್ತು ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಗಳ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ರಾಷ್ಟ್ರೀಯ ಕಾನೂನು ಶಾಲೆ, ಭಾರತ ವಿಶ್ವವಿದ್ಯಾಲಯ, ಬೆಂಗಳೂರು ರವರು ಸಂಶೋಧನೆ ನಡೆಸಿ ಸಲ್ಲಿಸಿರುವ ಅಧ್ಯಯನ ವರದಿಯನ್ವಯ ಶೈಕ್ಷಣಿಕ ಮಟ್ಟವು ಬಹಳ ಕಡಿಮೆ ಇದ್ದು ಸಫಾಯಿ ಕರ್ಮಚಾರಿಗಳ ಮಕ್ಕಳು ಶೇ.29ರಷ್ಟು ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಣ ಶೇ.16.70 ರಷ್ಟು ಪ್ರೌಢ ಶಿಕ್ಷಣವನ್ನು ಪಡೆದಿದ್ದು ಮತ್ತು ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಗಳ ಮಕ್ಕಳು ಶೇ.10.60 ರಷ್ಟು ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಣ ಶೇ.21.60 ರಷ್ಟು ಪ್ರೌಢ ಶಿಕ್ಷಣವನ್ನು ಪಡೆದಿದ್ದು, ಹೆಚ್ಚಿನ ಪ್ರಮಾಣದಲ್ಲಿ ಅನಕ್ಷರಸ್ಥರಾಗಿರುತ್ತಾರೆ. ಸಮಾಜದ ಆರೋಗ್ಯ ರಕ್ಷಕರಾದ ಸಫಾಯಿ ಕರ್ಮಚಾರಿಗಳು / ಪೌರ ಕಾರ್ಮಿಕರು ಮುಂಜಾನೆ 5 ಗಂಟೆಗೆ ಕರ್ತವ್ಯಕ್ಕೆ ಹಾಜರಾಗಬೇಕಾಗಿರುವುದರಿಂದ ಇವರ ಮಕ್ಕಳ ಪಾಲನೆ-ಪೋಷಣೆ ಮಾಡುವುದು ಕಷ್ಟಕರವಾಗಿದ್ದರೂ ಸಹ ಪೌರಕಾರ್ಮಿಕರ ಮಕ್ಕಳು ಉನ್ನತ ಶಿಕ್ಷಣವನ್ನು ಪಡೆಯುತ್ತಿರುವುದನ್ನು ಮನಗೊಂಡ ಆಯೋಗದ ಅಧ್ಯಕ್ಷರು ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮತ್ತು ಉಪವಿಭಾಗ ಮಟ್ಟದ ಅಧಿಕಾರಿಗಳು ಮತ್ತು ಕಾರ್ಮಿಕರನ್ನು ಒಳಗೊಂಡಂತೆ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ಪೌರಕಾರ್ಮಿಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಮೂಲಕ ಅವರಿಗೆ ಶೈಕ್ಷಣಿಕವಾಗಿ ಉತ್ತೇಜನ ನೀಡಿರುತ್ತಾರೆ.

S.V
14/09/2023

ಮಾನ್ಯ ರಾಜ್ಯ ಸಚಿವರು, ಸಾಮಾಜಿಕ ಮತ್ತು ಸಬಲೀಕರಣ ಮಂತ್ರಾಲಯ ಮತ್ತು ಮಾನ್ಯ ಅಧ್ಯಕ್ಷರು, ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಆಯೋಗ ಮತ್ತು ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗರವರ ಅಧ್ಯಕ್ಷತೆಯಲ್ಲಿ ನಡೆದ ಒಂದು ದಿನದ ಕಾರ್ಯಾಗಾರದಲ್ಲಿ ಸಫಾಯಿ ಕರ್ಮಚಾರಿಗಳು ಮತ್ತು ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಗಳ ಮಕ್ಕಳು ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ಹಾಗೂ ಪದವಿಯಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ಮಕ್ಕಳಿಗೆ ಅವರ ವಿದ್ಯಾಭ್ಯಾಸವನ್ನು ಉತ್ತೇಜಿಸುವ ಸಲುವಾಗಿ "ಪ್ರತಿಭಾ ಪುರಸ್ಕಾರ" ಕಾರ್ಯಕ್ರಮವನ್ನು ರಾಜ್ಯಾದ್ಯಂತ ಏಕಕಾಲದಲ್ಲಿ ಆಚರಿಸಲು "ಪ್ರತಿಭಾ ಪುರಸ್ಕಾರ ದಿನ" ಎಂದು ಘೋಷಿಸಿ ಸರ್ಕಾರದ ಆದೇಶ ಹೊರಡಿಸಲು ನಿರ್ಣಯಿಸಲಾಗಿರುತ್ತದೆ.

**ಭಾರತ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರು ಶಾಲೆಗೆ ಸೇರಿದ ದಿನಾಂಕ:07.11.1900 ರನ್ನು** ಸಫಾಯಿ ಕರ್ಮಚಾರಿಗಳು ಮತ್ತು ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಗಳ ಮಕ್ಕಳು ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ಹಾಗೂ ಪದವಿಯಲ್ಲಿ ಉನ್ನತ ಶ್ರೇಣಿಯಲ್ಲಿ ತೇರ್ಗಡೆಯಾದ ಮಕ್ಕಳಿಗೆ ಅವರ ವಿದ್ಯಾಭ್ಯಾಸವನ್ನು ಉತ್ತೇಜಿಸುವ ಸಲುವಾಗಿ "ಪ್ರತಿಭಾ ಪುರಸ್ಕಾರ" ಕಾರ್ಯಕ್ರಮವನ್ನು ರಾಜ್ಯಾದ್ಯಂತ ಏಕಕಾಲದಲ್ಲಿ ಆಚರಿಸಲು "ಪ್ರತಿಭಾ ಪುರಸ್ಕಾರ ದಿನ" ಎಂದು ಘೋಷಿಸಿ ಸರ್ಕಾರದ ಆದೇಶ ಸಂಖ್ಯೆ: ನಅಇ 124 ಟಿಎಂಎಸ್ 2012, ದಿನಾಂಕ:18.05.2015 ರನ್ವಯ ಪೌರಕಾರ್ಮಿಕರ ಕುಟುಂಬದ ಕಲ್ಯಾಣಕ್ಕಾಗಿ ವಿದ್ಯಾಭ್ಯಾಸ, ವಸತಿ ಮತ್ತು ಅವರ ಉದ್ಯೋಗಾರ್ಹತೆಗಳಿಗಾಗಿ ಶೇ.24.10 ಎಸ್‌ಸಿಎಸ್‌ಪಿ/ ಟಿಎಸ್‌ಪಿ ಅನುದಾನದ ಶೇ.20ರಷ್ಟು ಮೀಸಲಿಟ್ಟ ಅನುದಾನವನ್ನು ಸಂಬಂಧಿಸಿದ ನಗರ ಸ್ಥಳೀಯ ಸಂಸ್ಥೆಗಳ ಅನುದಾನದಡಿ ಭರಿಸಲು ಸರ್ಕಾರಿ ಆದೇಶ ಹೊರಡಿಸುವಂತೆ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ ಇವರು ಕೋರಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: SWD/SDC/244/2023,</u>**
**<u>ಬೆಂಗಳೂರು, ದಿನಾಂಕ:14-09-2023.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಫಾಯಿ ಕರ್ಮಚಾರಿಗಳ ಮತ್ತು ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಹಾಗೂ ಮ್ಯಾನ್‌ಹೋಲ್, ತೆರೆದ ಚರಂಡಿ, ಪಿಟ್‌ಗುಂಡಿಗಳಲ್ಲಿ ಮೃತಪಟ್ಟ ಕಾರ್ಮಿಕರ ಅವಲಂಭಿತರ ಪ್ರತಿಭಾವಂತ ಮಕ್ಕಳಿಗೆ ಶೈಕ್ಷಣಿಕವಾಗಿ ಉತ್ತೇಜನ ನೀಡಿ ಸನ್ಮಾನಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು **ಭಾರತ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರು ಶಾಲೆಗೆ ಸೇರಿದ ದಿನ ನವೆಂಬರ್-7ನ್ನು "ಪ್ರತಿಭಾ ಪುರಸ್ಕಾರ ದಿನ"** ಎಂದು ಆಚರಿಸಲು ಆದೇಶಿಸಿದೆ.

**ಷರತ್ತುಗಳು:**

1. ಪ್ರತಿಭಾ ಪುರಸ್ಕಾರ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು ಪೌರಕಾರ್ಮಿಕರ ಕಲ್ಯಾಣಕ್ಕಾಗಿ ಶೇ.24.10 ರಡಿ ಶೇ. 20% ನಗರ ಸ್ಥಳೀಯ ಸಂಸ್ಥೆ ಮತ್ತು

S.V
14/09/2023

ಗ್ರಾಮೀಣ ಸ್ಥಳೀಯ ಸಂಸ್ಥೆಗಳಲ್ಲಿ ನಿಗದಿಯಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.

2. ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಪದವಿ, ಸ್ನಾತಕೋತ್ತರ ಮತ್ತು ತತ್ಸಮಾನ ಕೋರ್ಸ್ ಗಳಲ್ಲಿ 60% ಕ್ಕಿಂತ ಹೆಚ್ಚು ಅಂಕ ಗಳಿಸಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಪರಿಗಣಿಸುವುದು.
3. ಆಯಾ ಶೈಕ್ಷಣಿಕ ವರ್ಷದಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಮಾತ್ರ ಪರಿಗಣಿಸುವುದು.
4. ಪೌರಕಾರ್ಮಿಕರ ಮಕ್ಕಳನ್ನು ಶೈಕ್ಷಣಿಕವಾಗಿ ಉತ್ತೇಜಿಸಲು ಅವರಿಗೆ ಬಹುಮಾನದ ರೀತಿಯಲ್ಲಿ ಕೋರ್ಸ್ ವಾರು ನಿಗದಿಪಡಿಸಿದ ಪುರಸ್ಕಾರ ಧನ ಮಂಜೂರು ಮಾಡುವುದು.
5. ಸಮಾಜ ಕಲ್ಯಾಣ ಇಲಾಖೆಯ ಜಂಟಿ/ಉಪ ನಿರ್ದೇಶಕರು, ಸಹಾಯಕ ನಿರ್ದೇಶಕರು (ಗ್ರೇಡ್-1, 2) ಸಂಪೂರ್ಣ ಮೇಲ್ವಿಚಾರಣೆಯನ್ನು ಮಾಡುವುದು.
6. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಗರ, ಗ್ರಾಮೀಣ ಭಾಗದ ವ್ಯಾಪ್ತಿಯಲ್ಲಿ ಸಫಾಯಿ ಕರ್ಮಚಾರಿಗಳು/ಗುರುತಿಸಲ್ಪಟ್ಟ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಮೃತ ಕುಟುಂಬದ ಅವಲಂಬಿತರ ಮಕ್ಕಳಿಗೆ ಪುರಸ್ಕಾರ ಧನವನ್ನು ಮಂಜೂರು ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

S.V
(ಕಲಾವತಿ ಎಸ್.ವಿ) 14/09/2023
ಸರ್ಕಾರದ ಉಪ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ :-**

1. ಮಹಾಲೇಖಪಾಲರು, ಲೆಕ್ಕ ಪತ್ರ: ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು
4. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
5. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಅಧ್ಯಕ್ಷರು, ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು.
7. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಮಂಡಳಿ, ಬೆಂಗಳೂರು.
9. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
10. ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ, ಬೆಂಗಳೂರು.
12. ಖಜಾನಾಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
13. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು,
14. ಎಲ್ಲಾ ಜಿಲ್ಲೆಯ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು,

15. ಎಲ್ಲಾ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳು
16. ಎಲ್ಲಾ ಜಿಲ್ಲೆಯ ಉಪವಿಭಾಗಾಧಿಕಾರಿಗಳು,
17. ಆಯುಕ್ತರು, 10 ಮಹಾನಗರ ಪಾಲಿಕೆಗಳು.
18. ಎಲ್ಲಾ ಜಿಲ್ಲೆಯ ಜಂಟಿ/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ
19. ಎಲ್ಲಾ ಜಿಲ್ಲೆಯ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ,
20. ಎಲ್ಲಾ ಜಿಲ್ಲೆಯ ತಾಲೂಕಿನ ತಹಸೀಲ್ದಾರ್‌ಗಳು
21. ಎಲ್ಲಾ ವಲಯಗಳು ಜಂಟಿ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
22. ಎಲ್ಲಾ ಜಿಲ್ಲೆಯ ಪೌರಾಯುಕ್ತರು- ನಗರಸಭೆ, ಮುಖ್ಯಾಧಿಕಾರಿಗಳು- ಪುರಸಭೆ/ ಪಟ್ಟಣ ಪಂಚಾಯಿತಿ
23. ಎಲ್ಲಾ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರು, ಸಫಾಯಿ ಕರ್ಮಚಾರಿಗಳ ಅಭಿವೃದ್ಧಿ ನಿಗಮ/ ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ
24. ಎಲ್ಲಾ ಜಿಲ್ಲೆಯ ತಾಲೂಕುಗಳ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
25. ಎಲ್ಲಾ ಜಿಲ್ಲೆಯ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳು (ಕ್ರ.ಸಂ 13 ರಿಂದ 25 ರವರೆಗೆ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು ಇವರ ಮುಖಾಂತರ)
26. ಮುಖ್ಯ ಲೆಕ್ಕಾಧಿಕಾರಿ, ಸಮಾಜ ಕಲ್ಯಾಣ ಇಲಾಖೆ, ಯವನಿಕ, ನೃಪತುಂಗ ರಸ್ತೆ, ಬೆಂಗಳೂರು.
27. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ :-**

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಧಾನಸಸೌಧ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.

***